ಪತ್ರಿಕಾ ಪ್ರಕಟಣೆ - PRESS RELEASE

ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ
RESERVE BANK OF INDIA

ಜಾಲತಾಣ : www.rbi.org.in
Website : www.rbi.org.in
ಇಮೇಲ್ /email : helpdoc@rbi.org.in

ಸಂವಹನ ಇಲಾಖೆ, ಕೇಂದ್ರ ಕಚೇರಿ, ಶಾಹಿದ್ ಭಗತ್ ಸಿಂಗ್ ಮಾರ್ಗ, ಫೋರ್ಟ್, ಮುಂಬೈ-400001 ಫೋನ್/ಫೋನ್: 022- 22660502

Department of Communication, Central Office, Shahid Bhagat Singh Marg, Fort, Mumbai-400001 फोन/Phone: 022- 22660502

25 ಸೆಪ್ಟೆಂಬರ್ 2025

**ದಿ ಸೌತ್ ಕೆನರಾ ಡಿಸ್ಟ್ರಿಕ್ಟ್ ಸೆಂಟ್ರಲ್ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ.**

'ವಸತಿ ಹಣಕಾಸು' ಜೊತೆ ಓದಲಾದ 'ವೈಯಕ್ತಿಕ ವಸತಿ ಸಾಲ ಮಿತಿಗಳ ಹೆಚ್ಚಳ ಮತ್ತು ವಾಣಿಜ್ಯ ರಿಯಲ್ ಎಸ್ಟೇಟ್ - ವಸತಿ ಗೃಹಗಳಿಗೆ ಉದರಿ (ಕ್ರೆಡಿಟ್) (CRE-RH)' ಕುರಿತಾಗಿ ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ನೀಡಿದ್ದ ಕೆಲವು ನಿರ್ದೇಶನಗಳ ಅನುಪಾಲನೆ ಮಾಡದೇ ಇದ್ದುದಕ್ಕಾಗಿ ಮತ್ತು ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949ರ (ಬಿಆರ್ ಆಕ್ಟ್) ಕಲಂ 19ರ ಜೊತೆ ಓದಲಾದ ಕಲಂ 56 ರ ನಿಬಂಧನೆಗಳ ಉಲ್ಲಂಘನೆಗಾಗಿ ಭಾರತೀಯ ರಿಸರ್ವ್ ಬ್ಯಾಂಕ್ ತನ್ನ ಸೆಪ್ಟೆಂಬರ್ 23, 2025 ರ ಆದೇಶದ ಮೂಲಕ ದಿ ಸೌತ್ ಕೆನರಾ ಡಿಸ್ಟ್ರಿಕ್ಟ್ ಸೆಂಟ್ರಲ್ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಕರ್ನಾಟಕ- ಈ ಬ್ಯಾಂಕಿಗೆ (ಬ್ಯಾಂಕು) ರೂ. 1.50 ಲಕ್ಷ (ರೂ. ಒಂದು ಲಕ್ಷ ಐವತ್ತು ಸಾವಿರ ಮಾತ್ರ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ (1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ತನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾರತೀಯ ರಿಸರ್ವ್ ಬ್ಯಾಂಕ್ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31, 2024 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನಬದ್ಧ ನಿರೀಕ್ಷಣೆಯನ್ನು ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ (ನಬಾರ್ಡ್-NABARD) ಮಾಡಿತ್ತು. ಶಾಸನಬದ್ಧ ನಿಬಂಧನೆಗಳ/ ಆರ್ ಬಿ ಐ ನೀಡಿದ್ದ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಮೇಲೆ ಹೇಳಿದ ನಿಬಂಧನೆಗಳು ಮತ್ತು ನಿರ್ದೇಶನಗಳನ್ನು ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಕೆಳಕಂಡ ಆರೋಪಗಳು ಸ್ಥಿರಪಟ್ಟಿವೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿದೆ ಎಂದು ಗೊತ್ತಾಯಿತು:

ಬ್ಯಾಂಕು-

i) ವಸತಿ ಹಣಕಾಸಿನ ಮೇಲಿನ ವಿವೇಕಯುತ ಅನಾವರಣ ಮಿತಿಗಳನ್ನು ಮೀರಿತ್ತು: ಮತ್ತು

ii) ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮವನ್ನು ಉಲ್ಲಂಘಿಸಿ ಬೇರೆ ಸಹಕಾರ ಸಂಘ ದಲ್ಲಿ ಷೇರುಗಳನ್ನು ಹೊಂದಿತ್ತು

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಪುನೀತ್ ಪಾಂಚೋಲಿ)**

**ಪತ್ರಿಕಾ ಪ್ರಕಟಣೆ: 2025-2026/1170**

ಚೀಫ್ ಜನರಲ್ ಮ್ಯಾನೇಜರ್